**ಬೆಳಗಾವಿಯ 7 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಚಿಕ್ಕೋಡಿ.**

**ಎಸ್.ಸಿ.ನಂ. 5057/2023.**

**ಸಿ.ಡಬ್ಲ್ಯೂ– 2 ಪಿ.ಡಬ್ಲ್ಯೂ– 1**

**ದಿಃ 29.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

| | | |
|---|---|---|
| ಪೂರ್ಣ ಹೆಸರು | : | ಮೋಹನಕುಮಾರ ಮಹಾದೇವ ಭಾಮನೆ |
| ವಯಸ್ಸು | : | 52 ವರ್ಷ. |
| ಉದ್ಯೋಗ | : | ನಿವೃತ್ತ ನೌಕರ |
| ವಾಸಸ್ಥಳ | : | ನಿಪ್ಪಾಣಿ |

**ಮುಖ್ಯ ವಿಚಾರಣೆಃ–** ಮಾನ್ಯ ಸರಕಾರಿ ಅಭಿಯೋಜಕರವರಿಂದಃ–

1) ಚಾ.ಸಾ.3 ಮತ್ತು 4 ರವರು ನನಗೆ ಗೊತ್ತು. ಈಗ ತೋರಿಸಿದ ಪಂಚನಾಮೆಯಲ್ಲಿ ನನ್ನ ಸಹಿ ಇದೆ. ಸದರಿ ಪಂಚನಾಮೆಯನ್ನು ನಿ.ಪಿ.1 ಎಂದು ಸಾಕ್ಷಿಯ ಸಹಿಯನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು. ಈಗ್ಗೆ 4 ವರ್ಷಗಳ ಹಿಂದೆ ನಾನು ನನ್ನ ಕೆಲಸದ ನಿಮಿತ್ಯ ಪೋಲಿಸ ಠಾಣೆಗೆ ಹೋಗಿದ್ದಾಗ ಪೋಲಿಸರು ಒಂದು ಪಂಚನಾಮೆಗೆ ನನ್ನ ಸಹಿ ಪಡೆದಿರುತ್ತಾರೆ. ಯಾವ ವಿಚಾರಕ್ಕೆಂದು ನನಗೆ ತಿಳಿದಿಲ್ಲ. ಅದರಲ್ಲಿ ಎನು ಬರೆದಿದೆ ಎಂದು ಗೊತ್ತಿಲ್ಲ. ನನಗೆ ಕನ್ನಡ ಭಾಷೆಯನ್ನು ಓದಲು ಮತ್ತು ಬರೆಯಲು ಬರುವುದಿಲ್ಲ. ಪಂಚನಾಮೆಯನ್ನು ನನಗೆ ಓದಿ ಹೇಳಿಲ್ಲ. ಪೋಲಿಸ ಠಾಣೆಯಿಂದ ಅರ್ಧ ಕಿ.ಮೀ ದೂರದಲ್ಲಿ ನಮ್ಮನ್ನು ಕರೆದುಕೊಂಡು ಹೋಗಿ

ಪೋಲಿಸರು ಒಂದು ಛಾಯಾಚಿತ್ರ ತೆಗೆದಿರುತ್ತಾರೆ. ಸದರಿ ಛಾಯಾಚಿತ್ರದಲ್ಲಿ ನಾನು ಇದ್ದೇನೆ. ಆ ಛಾಯಾಚಿತ್ರವನ್ನು ನಿ.ಪಿ.2 ಎಂದು ಗುರುತಿಸಲಾಯಿತು. ನನ್ನ ಮುಂದೆ ಯಾವುದೇ ವಸ್ತುಗಳನ್ನು ಜಪ್ತಿಪಡಿಸಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸರಕಾರಿ ಅಭಿಯೋಜಕರು ನ್ಯಾಯಾಲಯದ ಅನುಮತಿ ಕೋರಿದ್ದಾರೆ, ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ- ಮಾನ್ಯ ಸರಕಾರಿ ಅಭಿಯೋಜಕರವರಿಂದಃ**

1) ದಿನಾಂಕಃ 12.02.2022 ರಂದು ಪೋಲಿಸರು ನನ್ನನ್ನು, ಚಾ.ಸಾ.3 ಮತ್ತು 4 ರವರನ್ನು ನಿಪ್ಪಾಣಿ ಪಟ್ಟಣದ ಜವಾಹಾರಲಾಲ ಕೆರೆಯ ಹತ್ತಿರ ಕೆರೆಯ ಕಟ್ಟಡದ ಪಶ್ಚಿಮ ಗೋಡೆಯ ಹತ್ತಿರ ಆರೋಪಿಯು ಚಾ.ಸಾ.1 ರವರಿಗೆ ಹಲ್ಲೆ ಮಾಡಿದ ಸಂಬಂಧ ಚಾ.ಸಾ.4 ರವರು ತೋರಿಸಿದ ಕೃತ್ಯ ನಡೆದ ಸ್ಥಳದಲ್ಲಿ ಸಂಜೆ 5.15 ರಿಂದ 06.00 ಗಂಟೆಯವರೆಗೆ ನಿ.ಪಿ.1 ರಂತೆ ಪಂಚನಾಮೆ ಮಾಡಿ ಸ್ಥಳದಲ್ಲಿ ಈಗ ನ್ಯಾಯಾಲಯದ ಮುಂದೆ ಇರುವ ಒಂದು ಹಿಡಿಗೈ ಗಾತ್ರದ ಕಲ್ಲನ್ನು ಹಾಗೂ ಚಾ.ಸಾ.1 ರವರು ಧರಿಸಿದ್ದ ರಕ್ತದ ಕಲೆಯಾಗಿದ್ದ ಸಮವಸ್ತ್ರವನ್ನು ಜಪ್ತಿಪಡಿಸಿ ಪಂಚನಾಮೆಯನ್ನು ಓದಿ ಹೇಳಿ ನನ್ನ ಸಹಿ ಪಡೆದಿದ್ದಾರೆ ಎಂದರೆ ಸುಳ್ಳು. ಆ ಸಮಯಕ್ಕೆ ನಿ.ಪಿ.2 ರ ಛಾಯಾಚಿತ್ರವನ್ನು ಸ್ಥಳದಲ್ಲಿ ತೆಗೆದಿದ್ದಾರೆ ಎಂದರೆ ಸರಿಯಲ್ಲ. ಆರೋಪಿಯು ನಮ್ಮ ಗ್ರಾಮದವನು ಆಗಿದ್ದರಿಂದ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ– ಆರೋಪಿ ಪರ ವಕೀಲರಿಂದಃ ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು.)

(ಸಾ.ಓ.ಹೆ.ಕೆ.ಸ.ಅ.)

(ವಿಜಯ ಕುಮಾರ)
7 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕೋಡಿ.